# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಭಾಗ್ಯಲಕ್ಷ್ಮಿ ಯೋಜನೆಯ ಮಾರ್ಗಸೂಚಿಗಳನ್ನು ಸರಳೀಕರಣಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸರ್ಕಾರಿ ಆದೇಶ ಸಂಖ್ಯೆ: ಮಮಇ 99 ಮಮಅ 2006, ದಿನಾಂಕ: 17.10.2006.
2. ಸರ್ಕಾರಿ ಆದೇಶ ಸಂಖ್ಯೆ: ಮಮಇ 99 ಮಮಅ 2006 (ಭಾ-2), ದಿನಾಂಕ: 19.06.2007
3. ಸರ್ಕಾರಿ ಆದೇಶ ಸಂಖ್ಯೆ: ಮಮಇ 152 ಮಮಅ 2008, ದಿನಾಂಕ: 14.08.2008
4. ಸರ್ಕಾರಿ ಆದೇಶ ಸಂಖ್ಯೆ: ಮಮಇ 97 ಮಮಅ 2011, ದಿನಾಂಕ: 17.09.2011
5. ಸರ್ಕಾರಿ ಆದೇಶ ಸಂಖ್ಯೆ: ಮಮಇ 57 ಮಮಅ 2013, ದಿನಾಂಕ: 19.03.2014
6. ಸರ್ಕಾರಿ ಆದೇಶ ಸಂಖ್ಯೆ: ಮಮಇ 181 ಮಮಅ 2013, ದಿನಾಂಕ: 09.09.2014
7. ಸರ್ಕಾರಿ ಆದೇಶ ಸಂಖ್ಯೆ: ಮಮಇ 28 ಮಮಅ 2014, ದಿನಾಂಕ: 09.07.2014
8. ಸರ್ಕಾರಿ ಆದೇಶ ಸಂಖ್ಯೆ: ಮಮಇ 145 ಮಮಅ 2014, ದಿನಾಂಕ: 06.03.2015
9. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಏಕ ಕಡತ ಸಂ:ಮಮಅಇ/ಮಕ/ಭಾಯೋ/ಸ.ಆ.ಪರಿಷ್ಕರಣ/ಸಭೆ/5/2017-18,ದಿನಾಂಕ: 18.04.2017 ಮತ್ತು 11.05.2017

**ಪ್ರಸ್ತಾವನೆ:**

ರಾಜ್ಯ ಸರ್ಕಾರಕ್ಕೆ ಹೆಣ್ಣು ಮಗುವಿನ ಬಗ್ಗೆ ಇರುವ ಕಾಳಜಿ ವ್ಯಕ್ತಪಡಿಸಲು ಹಾಗೂ ಹೆಣ್ಣು ಮಗುವಿನ ಬಗ್ಗೆ ಸಮಾಜದಲ್ಲಿರುವ ಧೋರಣೆಯನ್ನು ಬದಲಿಸಲು 2006-07ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಹೆಣ್ಣು ಮಕ್ಕಳ ರಕ್ಷಣೆಗೆ "ಭಾಗ್ಯಲಕ್ಷ್ಮಿ" ಎಂಬ ಹೊಸ ಕಲ್ಯಾಣ ಯೋಜನೆಯನ್ನು ಜಾರಿಗೆ ತರಲಾಗಿದೆ.

ಮೇಲೆ ಓದಲಾದ ಕ್ರಮಸಂಖ್ಯೆ (1)ರ ನಿರ್ದೇಶಕರ ಏಕ ಕಡತ ಪ್ರಸ್ತಾವನೆಯಲ್ಲಿ ಆದ್ಯತಾ ಕುಟುಂಬ ಪಡಿತರ ಚೀಟಿ ಹೊಂದಿರುವ ಕುಟುಂಬದಲ್ಲಿ ಜನಿಸಿದ ಮೊದಲ ಎರಡು ಹೆಣ್ಣುಮಕ್ಕಳಿಗೆ ಯೋಜನೆಯ ಸೌಲಭ್ಯವನ್ನು ಕಲ್ಪಿಸುವುದು ಇಲಾಖೆಯ ಪ್ರಮುಖ ಉದ್ದೇಶವಾಗಿರುತ್ತದೆ. ಆಗಸ್ಟ್ 2016ರಿಂದ ಮಾರ್ಚ್ 2017ರ ಅವಧಿಯಲ್ಲಿ ಆಡಳಿತಾತ್ಮಕ ಸಮಸ್ಯೆಯಿಂದಾಗಿ ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯಿಂದ ಪಡಿತರ ಚೀಟಿ ವಿತರಣೆಯಲ್ಲಿನ ಕಾರ್ಯವಿಧಾನದಲ್ಲಿ ಬದಲಾವಣೆ ಮಾಡಿರುವುದರಿಂದ ಬಿಪಿಎಲ್ ಕಾರ್ಡ್ ವಿತರಣೆಯ ವಿಳಂಬದಿಂದಾಗಿ, ಈ ಅವಧಿಯಲ್ಲಿ ಜನಿಸಿ ಒಂದು ವರ್ಷ ಪೂರ್ಣಗೊಂಡ ಮಕ್ಕಳು ಭಾಗ್ಯಲಕ್ಷ್ಮಿ ಸೌಲಭ್ಯದಿಂದ ವಂಚಿತರಾಗುವ ಸಂಭವವಿರುತ್ತದೆ.

ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಪಡೆಯಲು ನೊಂದಣಿ ಮಾಡಲು ಇರುವ ಒಂದು ವರ್ಷದ ಅವಧಿಯನ್ನು ಎರಡು ವರ್ಷಕ್ಕೆ ವಿಸ್ತರಿಸುವ ಅಗತ್ಯವಿರುತ್ತದೆ. ನೊಂದಣಿ ಮಾಡಲು ಇರುವ ಎರಡು ವರ್ಷಕ್ಕೆ ವಿಸ್ತರಿಸಿದಲ್ಲಿ, ಯೋಜನೆಯ ಸೌಲಭ್ಯವನ್ನು ಎಲ್ಲಾ ಅರ್ಹ ಮಕ್ಕಳಿಗೂ ನೀಡಲು ಅವಕಾಶವಾಗುತ್ತದೆ.

2062
26/2/18

470
26/02/18

ಭಾಗ್ಯಲಕ್ಷ್ಮಿ ಯೋಜನೆಯ ಮಾನದಂಡದಂತೆ ಕುಟುಂಬದ ಎರಡನೇ ಮಗುವನ್ನು ನೊಂದಣಿ ಮಾಡುವ ಸಂದರ್ಭದಲ್ಲಿ ಮಗುವಿನ ತಂದೆ ಅಥವಾ ತಾಯಿ ಶಾಶ್ವತ ಕುಟುಂಬ ಯೋಜನೆ ಪದ್ಧತಿಯನ್ನು ಅಳವಡಿಸಿಕೊಂಡಿರುವ ಬಗ್ಗೆ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು ಸಲ್ಲಿಸುವುದು ಅವಶ್ಯಕವಾಗಿರುತ್ತದೆ. ಆದರೆ ಆರೋಗ್ಯ ಹಾಗೂ ಇನ್ನಿತರ ಸಮಸ್ಯೆಗಳಿಂದಾಗಿ ಫಲಾನುಭವಿ ಪೋಷಕರುಗಳಿಗೆ ಈ ದಾಖಲೆಯನ್ನು ಮಗುವಿಗೆ ಒಂದು ವರ್ಷ ಪೂರ್ಣಗೊಳ್ಳುವ ಮೊದಲು ವೈದ್ಯಕೀಯ ಕಾರಣಗಳಿಂದ ನೀಡಲು ಸಾಧ್ಯವಾಗುತ್ತಿಲ್ಲ. ಕುಟುಂಬದಲ್ಲಿ ಮಕ್ಕಳ ಸಂಖ್ಯೆಯನ್ನು ನಿಯಂತ್ರಣ ಮಾಡಲು ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆ ಹೊರತು ಪಡಿಸಿ ಇತರೆ ಕೆಲವು ವಿಧಾನಗಳು ಲಭ್ಯವಿರುವುದರಿಂದ ಕುಟುಂಬ ಯೋಜನೆ ಶಸ್ತ್ರಚಿಕಿತ್ಸೆ ದೃಢೀಕರಣ ಪತ್ರವನ್ನು ಕಡ್ಡಾಯಗೊಳಿಸುವುದು ಸೂಕ್ತವಲ್ಲ. ಇದರಿಂದಾಗಿ ಕೆಲವು ಅರ್ಹ ಮಕ್ಕಳು ಯೋಜನೆಯ ಸೌಲಭ್ಯದಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ ಸದರಿ ಷರತ್ತನ್ನು ಸಡಿಲಿಸುವುದು ಸೂಕ್ತವಾಗಿದೆ. ಹಾಗೂ ಆದ್ಯತಾ ಪಡಿತರ ಚೀಟಿ ಹೊಂದಿರುವ ಕುಟುಂದಲ್ಲಿ ಜನಿಸಿರುವ ಮೊದಲ ಎರಡು ಹೆಣ್ಣುಮಕ್ಕಳನ್ನು ಯೋಜನೆಯಡಿ ನೊಂದಣಿ ಮಾಡುವುದು ಇಲಾಖೆಯ ಉದ್ದೇಶವಾಗಿರುತ್ತದೆ.

ಎರಡನೇ ಮಗುವನ್ನು ಯೋಜನೆಯಡಿ ನೊಂದಣಿ ಮಾಡುವ ಸಂದರ್ಭದಲ್ಲಿ ಕಡ್ಡಾಯ ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆಗೆ ಒಳಪಡಬೇಕೆಂಬ ಷರತ್ತನ್ನು ಕೈ ಬಿಡಲು ಪ್ರಸ್ತಾಪಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 67 ಮಮಅ 2017, ದಿನಾಂಕ: 24.02.2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಭಾಗ್ಯಲಕ್ಷ್ಮಿ ಯೋಜನೆಯ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ಸರಳೀಕರಣಗೊಳಿಸಿ ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಲಾಗಿದೆ.

1. ಭಾಗ್ಯಲಕ್ಷ್ಮಿ ಯೋಜನೆಯ ಸೌಲಭ್ಯವನ್ನು ಪಡೆಯಲು ನೊಂದಣಿ ಮಾಡಲು ಮಗು ಜನಿಸಿದ ಒಂದು ವರ್ಷದೊಳಗೆ ಇರುವ ಅವಧಿಯನ್ನು ಮಗು ಜನಿಸಿದ ಎರಡು ವರ್ಷದವರೆಗೆ ವಿಸ್ತರಿಸಲಾಗಿದೆ.
2. ಎರಡನೇ ಮಗುವನ್ನು ಯೋಜನೆಯಡಿ ನೊಂದಣಿ ಮಾಡುವ ಸಂದರ್ಭದಲ್ಲಿ ಕಡ್ಡಾಯ ಕುಟುಂಬ ಯೋಜನೆ ಶಸ್ತ್ರ ಚಿಕಿತ್ಸೆಗೆ ಒಳಪಡಬೇಕೆಂಬ ಷರತ್ತನ್ನು ಕೈ ಬಿಡಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 362 ವೆಚ್ಚ-10/2017, ದಿನಾಂಕ: 29.07.2017ರ ಮೇರೆಗೆ ಹಾಗೂ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ: ಸಿ:121/2018, ದಿನಾಂಕ: 12.02.2018ರಲ್ಲಿನ ಸಹಮತದೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಸಂಧ್ಯಾ ಎಲ್.ನಾಯಕ್)
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ

<u>ಇವರಿಗೆ:</u>

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು / ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,

2. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
3. ಪ್ರಧಾನ ಮಹಾಲೇಖಪಾಲರು (ಎ ಆಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂ:5329, ಬೆಂಗಳೂರು-560 001.
4. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
5. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆನಂದರಾವ್ ವೃತ್ತ, ಬೆಂಗಳೂರು
6. ಆಯುಕ್ತರು, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು
7. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು
8. ನಿರ್ದೇಶಕರು, ಪರಿಯೋಜನಾ ರಚನಾ ವಿಭಾಗ, ಯೋಜನಾ ಮತ್ತು ಸಾಂಖ್ಯಿಕ ಇಲಾಖೆ,
9. ನಿರ್ದೇಶಕರು/ ಜಂಟಿ ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ ಬೆಂಗಳೂರು.
10. ಎಲ್ಲಾ ಜಿಲ್ಲಾಧಿಕಾರಿಗಳು
11. ಜಿಲ್ಲಾ ಕಾರ್ಯನಿರ್ವಹಣಾಧಿಕಾರಿಗಳು
12. ಎಲ್ಲಾ ಜಿಲ್ಲಾ ಖಜಾನಾಧಿಕಾರಿಗಳು
13. ಎಲ್ಲಾ ಉಪ ನಿರ್ದೇಶಕರು / ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
14. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
15. ಅಧ್ಯಕ್ಷರು, ಭಾರತೀಯ ಜೀವ ವಿಮಾ ನಿಗಮ, ಪಿ & ಜಿ. ಎಸ್. ಯುನಿಟ್, ಜೀವನ್ ಪ್ರಕಾಶ್, 4ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು 560002.
16. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.
(ಕ್ರಮ ಸಂಖ್ಯೆ:10, 11, 12, 13, 15 ನಿರ್ದೇಶನಾಲಯದ ಮುಖಾಂತರ)

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಆಪ್ತಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತಕಾರ್ಯದರ್ಶಿ.